ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: (RDPR)

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ  ದಿನಾಂಕ : DATE : 13/12/19

---

### ಸ್ಥಳೀಯ ಸಂಸ್ಥೆಗಳ ಸದನ ಸಮಿತಿಯಿಂದ ಹುಳಿಮಾವು ಕೆರೆ ಸಮೀಕ್ಷೆ

# ಒತ್ತುವರಿ ತೆರವಿಗೆ ಸೂಚನೆ

ಪ್ರಜಾವಾಣಿ ವಾರ್ತೆ  13/12/19

ಬೆಂಗಳೂರು: ಬಿಜೆಪಿ ಶಾಸಕ ಆರಗ ಜ್ಞಾನೇಂದ್ರ ನೇತೃತ್ವದ ಸ್ಥಳೀಯ ಸಂಸ್ಥೆಗಳ ಸದನ ಸಮಿತಿಯು ಎಲೆ ಮಲ್ಲಪ್ಪ ಶೆಟ್ಟಿ ಕೆರೆ ಹಾಗೂ ಹುಳಿಮಾವು ಕೆರೆ ಪ್ರದೇಶವನ್ನು ಗುರುವಾರ ಪರಿಶೀಲಿಸಿ, ಜಲಕಾಯದ ಒತ್ತುವರಿಯನ್ನು ತೆರವು-ಗೊಳಿಸುವಂತೆ ಸೂಚಿಸಿತು.

'ಮೂರು ವರ್ಷಗಳ ಹಿಂದೆಯೂ ಈ ಕೆರೆಗಳ ಸರ್ವೆ ನಡೆಸಲಾಗಿದೆ. ಈವರೆಗೆ ಒತ್ತುವರಿದಾರರ ಮೇಲೆ ಕ್ರಮ ಕೈಗೊಂಡಿಲ್ಲ. ಕೆರೆಗಳ ಪಕ್ಕದಲ್ಲಿಯೇ ಎತ್ತರದ ಕಟ್ಟಡಗಳಿವೆ. ಕೆಲವರು ಜಲಕಾಯದ ಮೀಸಲು ಪ್ರದೇಶವನ್ನೂ ಅತಿಕ್ರಮಣ ಮಾಡಿರುವುದು ಸ್ಪಷ್ಟವಾಗಿ ಗೋಚರಿಸುತ್ತದೆ. ಅಧಿಕಾರಿಗಳಿಗೆ ಒತ್ತುವರಿಯನ್ನು ತೆರವುಗೊಳಿಸುವಂತೆ ಸೂಚಿಸಲಾಗಿದೆ' ಎಂದು ಆರಗ ಜ್ಞಾನೇಂದ್ರ ತಿಳಿಸಿದರು.

ಸಮೀಕ್ಷೆ ವರದಿಯ ಪ್ರಕಾರ ಹುಳಿಮಾವು ಕೆರೆಯ ಅಧಿಕ ಪ್ರದೇಶವನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವೇ (ಬಿಡಿಎ) ಒತ್ತುವರಿ ಮಾಡಿದೆ. ಸುಮಾರು 18 ಎಕರೆ 30 ಗುಂಟೆ ಒತ್ತುವರಿ ಮಾಡಿದೆ.

ಎಲೆ ಮಲ್ಲಪ್ಪ ಶೆಟ್ಟಿ ಕೆರೆಯ ಪ್ರದೇಶದ ಮೇಲೆ ಕಟ್ಟಡ ಅವಶೇಷಗಳನ್ನು ಎಸೆದಿರುವ ಬಗ್ಗೆ ದೂರು ದಾಖಲಿಸಿದರೂ ಪೊಲೀಸರು ಈವರೆಗೂ ಎಫ್‌ಐಆರ್ ದಾಖಲಿಸಲಿಲ್ಲ ಎಂದು ಅಧಿಕಾರಿಗಳು ತಿಳಿಸಿದರು.



ಆರಗ ಜ್ಞಾನೇಂದ್ರ ನೇತೃತ್ವದ ಸ್ಥಳೀಯ ಸಂಸ್ಥೆಗಳ ಸದನ ಸಮಿತಿಯು ಹುಳಿಮಾವು ಕೆರೆ ಪ್ರದೇಶವನ್ನು ಪರಿಶೀಲಿಸಿತು. ಶಾಸಕ ಸತೀಶ್ ರೆಡ್ಡಿ ಇದ್ದರು – ಪ್ರಜಾವಾಣಿ ಚಿತ್ರ

### 'ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸೂಚನೆ'

'ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಎಲ್ಲ ಸಾಕ್ಷ್ಯಗಳನ್ನು ಬಹಿರಂಗಪಡಿಸಿದರೂ ಅಪರಾಧಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಿಲ್ಲ. ಇದು ಗಂಭೀರ ಪ್ರಕರಣವಾಗಿದ್ದು, ಬೆಂಗಳೂರು ಗ್ರಾಮಾಂತರ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಗಮನಕ್ಕೆ ತರುತ್ತೇನೆ. ಅದೇ ರೀತಿ, ಅವಲಹಳ್ಳಿ ಠಾಣೆಯ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸೂಚಿಸುವೆ' ಎಂದು ಆರಗ ಜ್ಞಾನೇಂದ್ರ ಹೇಳಿದರು.